RNU AIR DHARWAD

**OCTOBER 06 2023**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ರಾಜ್ಯದ ರೈತರ ರಕ್ಷಣೆಗೆ ಪೂರಕವಾಗಿ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ತಂಡಗಳಿಗೆ ಮನವಿ.**
- **ಬೆಂಗಳೂರಿನಲ್ಲಿ ಸುರಂಗ ಮಾರ್ಗ ನಿರ್ಮಾಣ ಸೇರಿದಂತೆ, ಸಮಗ್ರ ಕ್ರಿಯಾ ಯೋಜನೆ ರೂಪಿಸಲು ಶೀಘ್ರದಲ್ಲೇ ಕ್ರಮ – ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.**
- **ತುಂಗಭದ್ರಾ ಜಲಾಶಯದ ನೀರಿನ ಒಳಹರಿವು ಆಧರಿಸಿ ರೈತರ ಬೆಳೆಗಳಿಗೆ ನವೆಂಬರ್ 30ರ ವರೆಗೆ ನೀರು ಹರಿಸಲು ಕ್ರಮ – ಸಚಿವ ಶಿವರಾಜ್ ತಂಗಡಗಿ.**
- **ಅಂಗಾಂಗ ದಾನದ ಮೂಲಕ ಜೀವ ರಕ್ಷಣೆಗೆ ನೆರವಾಗುವಂತೆ ಸಚಿವ ದಿನೇಶ್ ಗುಂಡೂರಾವ್ ಕರೆ.**

**ಈಗ ವಾರ್ತೆಗಳ ವಿವರ**

**ರಾಜ್ಯದ ರೈತರ ರಕ್ಷಣೆಗೆ ಪೂರಕವಾಗಿ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರದ ತಂಡಗಳಿಗೆ ಮನವಿ ಮಾಡಿದ್ದಾರೆ. ಬರ ಪರಿಸ್ಥಿತಿ ಅಧ್ಯಯನಕ್ಕಾಗಿ ರಾಜ್ಯಕ್ಕೆ ಭೇಟಿ ನೀಡಿರುವ ಕೇಂದ್ರದ ಅಧಿಕಾರಿಗಳ ನಿಯೋಗದೊಂದಿಗೆ, ವಿಧಾನಸೌಧದಲ್ಲಿ ನಿನ್ನೆ ಸಮಾಲೋಚಿಸಿದ ಅವರು, ರಾಜ್ಯದಲ್ಲಿ 195 ತಾಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡಲಾಗಿದೆ. ನೈರುತ್ಯ ಮುಂಗಾರು ವಿಳಂಬ ಹಾಗೂ ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಶೇಕಡ 90 ರಷ್ಟು ಬಿತ್ತನೆಯಾಗಿದ್ದು, ಅದರಲ್ಲಿ 42 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಜಮೀನಿನಲ್ಲಿ ಹಸಿರು ಕಾಣಿಸಿದರೂ ಕೃಷಿ ಉತ್ಪಾದನೆ ಕುಂಠಿತವಾಗಿದೆ. ವಸ್ತುಸ್ಥಿತಿಯನ್ನು ಅರಿತು ಕೇಂದ್ರಕ್ಕೆ ಮನವರಿಕೆ ಮಾಡಿಕೊಡಬೇಕು. ಎನ್.ಡಿ.ಆರ್.ಎಫ್ ಮಾರ್ಗಸೂಚಿ ದರಗಳನ್ನು ಮೀರಿ ಹೆಚ್ಚಿನ ಪರಿಹಾರ ಕೊಡಿಸಿ, ರಾಜ್ಯದ ರೈತರ ಹಿತ ಕಾಪಾಡಲು ಸಹಕರಿಸಬೇಕು ಎಂದರು.**

**ಮುಂಗಾರು ವಿಳಂಬದ ಜೊತೆಗೆ ಆಗಸ್ಟ್ ತಿಂಗಳಿನಲ್ಲಿ 122 ವರ್ಷಗಳಲ್ಲೇ ಅತೀ ಕಡಿಮೆ ಮಳೆ ದಾಖಲಾಗಿದೆ. ಜಲಾಶಯಗಳು ಬರಿದಾಗಿವೆ. ಮುಂಗಾರು ಮುಗಿಯುತ್ತ ಬಂದಿದೆ. ಕುಡಿಯುವ ನೀರು ವಿದ್ಯುತ್ ಕೊರತೆಯ ಆತಂಕ ಸೃಷ್ಟಿಯಾಗಿದೆ ಎಂದರು.**

*******

**ಬೆಂಗಳೂರಿನ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಸುರಂಗ ಮಾರ್ಗ ನಿರ್ಮಾಣ ಸೇರಿದಂತೆ ಸಮಗ್ರ ಕ್ರಿಯಾ ಯೋಜನೆಯನ್ನು ರೂಪಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ನಿನ್ನೆ ಮಾತನಾಡಿದ ಅವರು, ರಸ್ತೆ ಮೂಲಸೌಕರ್ಯ, ಸಂಚಾರ ದಟ್ಟಣೆ ನಿವಾರಣೆ, ಸುರಂಗ ರಸ್ತೆ, ರಸ್ತೆ ಅಗಲೀಕರಣ ವಿಚಾರವಾಗಿ ಸಲಹೆಗಳನ್ನು ಸ್ವೀಕರಿಸಲಾಗಿದೆ. ಯೋಜನೆ ಅನುಷ್ಠಾನ ಕುರಿತು ಜಾಗತಿಕ ಟೆಂಡರ್ ಕರೆಯಲು ನಿರ್ಧರಿಸಲಾಗಿದೆ. ಇದೇ 9 ರಂದು ವಿಶೇಷ ಕಾರ್ಯಾಗಾರದಲ್ಲಿ ಚರ್ಚಿಸಿ ಯೋಜನೆ ಅನುಷ್ಠಾನದ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದರು. ನಗರದ ಬೇರೆ ಬೇರೆ ಪ್ರದೇಶಗಳಲ್ಲಿ 190 ಕಿಲೋಮೀಟರ್**

ರಸ್ತೆಗಳಲ್ಲಿ ಸಂಚಾರ ದಟ್ಟಣೆಯನ್ನು ಗುರುತಿಸಲಾಗಿದೆ. ಇಲ್ಲಿ ವಿವಿಧ ಯೋಜನೆಗಳನ್ನು ಕೈಗೊಂಡು ಸಮಸ್ಯೆ ಬಗೆಹರಿಸಲು ಪ್ರಯತ್ನಿಸಲಾಗುವುದು. ಬೆಂಗಳೂರಿನ ತೆರಿಗೆ ಪದ್ಧತಿಯನ್ನು ಸಮಗ್ರವಾಗಿ ಸುಧಾರಣೆ ಮಾಡಿ, ಸಂಪನ್ಮೂಲ ಕ್ರೋಢೀಕರಣವನ್ನು ಹೆಚ್ಚಿಸಲು ಪರಿಶೀಲಿಸಲಾಗುತ್ತದೆ ಎಂದು ತಿಳಿಸಿದರು.

*******

ತುಂಗಭದ್ರಾ ಜಲಾಶಯದಲ್ಲಿ ಪ್ರಸ್ತುತ 53 ಟಿಎಂಸಿ ನೀರಿನ ಲಭ್ಯತೆ ಇದೆ. ಒಳಹರಿವನ್ನು ಆಧರಿಸಿ ರೈತರ ಬೆಳೆಗಳಿಗೆ ನವೆಂಬರ್ 30ರ ವರೆಗೆ ಹಂತ–ಹಂತವಾಗಿ ನೀರು ಹರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ. ತುಂಗಭದ್ರಾ ಜಲಾಶಯದಲ್ಲಿ ಲಭ್ಯವಿರುವ ನೀರಿನ ಪ್ರಮಾಣ ಹಾಗೂ ಬೆಳೆಗಳಿಗೆ ನೀರು ಹರಿಸುವ ಕುರಿತು ವಿಕಾಸಸೌಧದಲ್ಲಿ ನಿನ್ನೆ ನಡೆದ ನೀರಾವರಿ ಸಲಹಾ ಸಮಿತಿಯ ಸಭೆಯಲ್ಲಿ ಮಾತನಾಡಿದ ಅವರು, ಎಡದಂಡೆ ಮತ್ತು ಬಲದಂಡೆ ನಾಲೆಗಳಲ್ಲಿನ ರೈತರ ಬೆಳೆಗಳನ್ನು ರಕ್ಷಿಸಲು ಆದ್ಯತೆ ನೀಡಲಾಗುವುದು. ಆಂಧ್ರಪ್ರದೇಶದ ಕೋಟಾದಿಂದ 1 ಟಿಎಂಸಿ ನೀರನ್ನು ಹೊಂದಾಣಿಕೆಯ ಮೇಲೆ ಪಡೆದುಕೊಳ್ಳಲು ಇದೇ 11 ರಂದು ಜಲಸಂಪನ್ಮೂಲ ಖಾತೆ ಸಚಿವ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸಭೆ ನಡೆಸಲಾಗುವುದು ಎಂದು ತಿಳಿಸಿದರು.

*******

ಮರಣದ ನಂತರ ಅಂಗಾಂಗ ದಾನದ ಮೂಲಕ ಮತ್ತೊಂದು ಜೀವ ಉಳಿಸಲು ಅವಕಾಶವಿರುವಾಗ ಅದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮರಣದ ನಂತರ ಅಂಗಾಂಗ ದಾನದ ಬಗ್ಗೆ ಜನಜಾಗೃತಿ ಮೂಡಿಸಲು ಮತ್ತು ಬದ್ಧತೆಯ ಪ್ರದರ್ಶನಕ್ಕೆ ಸರಳೀಕರಣವಾದ ಆ್ಯಪ್ ಅನ್ನು ಲೋಕಾರ್ಪಣೆ ಮಾಡಿ ನಂತರ ಮಾತನಾಡಿದ ಅವರು, ಬೇಡಿಕೆ ಮತ್ತು ಪೂರೈಕೆ ನಡುವೆ ಸಾಕಷ್ಟು ಅಂತರವಿದೆ. ಅಂಗಾಂಗ ದಾನದ ಬಗ್ಗೆ ಜನರಲ್ಲಿರುವ ತಪ್ಪು ಕಲ್ಪನೆಗಳು ನಿವಾರಣೆಯಾಗಬೇಕು. ಹೆಚ್ಚು ಜನ ಮತ್ತೊಬ್ಬರ ಜೀವ ರಕ್ಷಣೆಗೆ ನೆರವಾಗಬೇಕು ಎಂದು ಸಲಹೆ ನೀಡಿದರು.

*******

ಧಾರವಾಡ ಜಿಲ್ಲೆಯ ಬರ ಪರಿಸ್ಥಿತಿ ಅಧ್ಯಯನಕ್ಕೆ ಕೇಂದ್ರ ಸರ್ಕಾರದ ತಂಡವು ನಾಳೆ ಆಗಮಿಸುತ್ತಿದ್ದು, ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಪ್ರವಾಸ ಕೈಗೊಂಡು  ಬೆಳೆಹಾನಿ ಕುರಿತು ಪರಿಶೀಲನೆ ನಡೆಸಲಿದೆ. ಅಧ್ಯಯನ ತಂಡವು ನಾಳೆ ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಬರ ಪರಿಶೀಲನೆ ಮಾಡಲಿದೆ. ಕೇಂದ್ರ ತಂಡ ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಕಂದಾಯ, ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳು ಈ ಸಾಲಿನ ಮಳೆಯ ವಾಸ್ತವ ಪರಿಸ್ಥಿತಿ, ಹಲವು ಕಡೆ ಸಂಪೂರ್ಣ ಬೆಳೆ ಹಾನಿ, ಕೆಲವೆಡೆ ಬೆಳೆ ಇದ್ದರೂ ಉಂಟಾಗಲಿರುವ ತೀವ್ರ ಇಳುವರಿ ಕುಸಿತದ ಬಗ್ಗೆ ಮಾಹಿತಿ ನೀಡಲಿದ್ದಾರೆ. ತುಮಕೂರು ಜಿಲ್ಲೆಯಲ್ಲಿ ಬರದಿಂದ 148 ಕೋಟಿ ನಷ್ಟವಾಗಿದೆ. ಇಂದು ತುಮಕೂರು ಜಿಲ್ಲೆಗೆ ಕೇಂದ್ರ ಬರ ವೀಕ್ಷಣ ತಂಡ ಭೇಟಿ ನೀಡಲಿದೆ. ಮಧುಗಿರಿಯಲ್ಲಿ ಡಿಜಿಟಲ್ ಪ್ರಾತ್ಯಕ್ಷಿಕೆ ಮೂಲಕ ಜಿಲ್ಲೆಯ ಬೇರೆ ತಾಲ್ಲೂಕಿನಲ್ಲಿರುವ ಬರ ಪರಿಸ್ಥಿತಿಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಕೃಷಿ ಇಲಾಖೆ ನೀಡಲಿದೆ. ಸಂಜೆ  ಮಧುಗಿರಿಯಿಂದ ಚಿತ್ರದುರ್ಗ ಜಿಲ್ಲೆಗೆ ಬರ ಅಧ್ಯಯನ ತಂಡ ತೆರಳಲಿದೆ ಎಂದು  ಜಿಲ್ಲಾಧಿಕಾರಿ ಕೆ.ಶ್ರೀನಿವಾಸ್ ತಿಳಿಸಿದ್ದಾರೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಸುಪ್ರಿಂಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಪಂಚಾಯತ್ ರಾಜ್ ಸಂಸ್ಥೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ ರಾಜಕೀಯ ಪ್ರಾತಿನಿಧ್ಯಕ್ಕೆ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಕೆ. ಭಕ್ತವತ್ಸಲ ಸಮಿತಿ ರಚಿಸಲಾಗಿತ್ತು. ಈ ಸಮಿತಿಯ 5 ಶಿಫಾರಸ್ಸುಗಳ ಪೈಕಿ ಮೂರು ಶಿಫಾರಸ್ಸುಗಳಿಗೆ ಸಂಪುಟ ಒಪ್ಪಿದೆ ಎಂದು ಕಾನೂನು ಮತ್ತು ಸಂಸದೀಯ ಖಾತೆ ಸಚಿವ ಎಚ್.ಕೆ.ಪಾಟೀಲ್ ಹೇಳಿದ್ದಾರೆ. ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಚುನಾವಣೆ ನಿರ್ವಹಣೆ, ಆಡಳಿತ ಸುಧಾರಣಾ ಇಲಾಖಾ ವ್ಯಾಪ್ತಿಗೆ ತರುವ ಶಿಫಾರಸ್ಸನ್ನು ಕ್ಯಾಬಿನೆಟ್ ಒಪ್ಪಿದ್ದು, ಈ ಹಿಂದೆ ಪಂಚಾಯತ್ ರಾಜ್ ಇಲಾಖೆ ಜೊತೆಗೆ ಚುನಾವಣಾ ಆಯೋಗ ಸಮನ್ವಯ ಸಾಧಿಸುತ್ತಿತ್ತು. ಇದೀಗ ಆಡಳಿತ

ಸುಧಾರಣಾ ಇಲಾಖೆಯಡಿ ನಿರ್ವಹಣೆ ಮಾಡಲಾಗುವುದು. ರಾಜ್ಯ ಮುಖ್ಯ ಚುನಾವಣಾ ಆಯೋಗ ಕೂಡ ಇನ್ನು ಮುಂದೆ ಆಡಳಿತ ಸುಧಾರಣಾ ಇಲಾಖೆ ಜೊತೆಗೆ ಚರ್ಚೆ ಮಾಡಬೇಕು ಎಂದರು.

*******

ಮಕ್ಕಳಲ್ಲಿ ಪರಿಸರದ ಕಾಳಜಿ ಮೂಡಿಸಲು ರಾಜ್ಯ ಸರ್ಕಾರ 'ಸಸ್ಯ ಶ್ಯಾಮಲಾ' ಯೋಜನೆ ಜಾರಿಗೊಳಿಸಿದ್ದು, ಧಾರವಾಡ ಜಿಲ್ಲೆಯಲ್ಲಿ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಷಣ್ಮುಖ ಸ್ವಾಮಿ ಕೆಳದಿಮಠ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಸಣ್ಣ ವಯಸ್ಸಿನಲ್ಲಿದ್ದಾಗಲೇ ಪರಿಸರ ಕಾಳಜಿ ಬೆಳೆಸುವುದು ಉತ್ತಮ. ಮಕ್ಕಳೇ ಸಸಿ ನೆಟ್ಟು, ಪೋಷಿಸಲು ಅವರನ್ನೇ ಪ್ರೋತ್ಸಾಹಿಸಿದರೆ ಹೆಚ್ಚು ಅನುಕೂಲ. ಇದರಿಂದ ಮಕ್ಕಳಲ್ಲಿ ಪರಿಸರ ಕಾಳಜಿಯೂ ಬರುತ್ತದೆ ಎಂದರು.

ಧ್ವನಿ– ಷಣ್ಮುಖ ಸ್ವಾಮಿ ಕೆಳದಿಮಠ (59 ಸೆಕೆಂದುಗಳು)

*******

ರಾಜ್ಯದಲ್ಲಿ ಮಳೆ ಕೊರತೆ ಹಿನ್ನೆಲೆಯಲ್ಲಿ ಸರ್ಕಾರ 195 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿರುವುದರಿಂದ, ಈ ಬಾರಿ ನಾಡಹಬ್ಬ ದಸರಾವನ್ನು ಸರಳವಾಗಿ, ಸಾಂಪ್ರದಾಯಿಕವಾಗಿ ಆಚರಿಸಲು ಸರ್ಕಾರ ನಿರ್ಧರಿಸಿದೆ ಎಂದು ರೇಷ್ಮೆ ಖಾತೆ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದಕೂ ಮುನ್ನ ಯುವ ದಸರಾ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಸ್ಪರ್ಧೆಗಳನ್ನು ಆಯೋಜಿಸಿ ಅದ್ದೂರಿಯಾಗಿ ಆಚರಿಸಲಾಗುತ್ತಿತ್ತು. ಆದರೆ, ಬರದ ಹಿನ್ನೆಲೆಯಲ್ಲಿ ಈ ಬಾರಿ ದಸರಾ ಸರಳವಾಗಿ ಆಚರಣೆಯಾಗಲಿದೆ ಎಂದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಚಿಕ್ಕಮಗಳೂರು ಜಿಲ್ಲೆಯಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ನೈರುತ್ಯ ಪದವೀಧರರ ಹಾಗೂ ಕರ್ನಾಟಕ ನೈರುತ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ನೂತನವಾಗಿ ಸಿದ್ಧಪಡಿಸುವ ಕಾರ್ಯ ಪ್ರಾರಂಭವಾಗಿದ್ದು, ಅರ್ಹ ಶಿಕ್ಷಕರು ಮತ್ತು ಪದವೀಧರರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ರಾಜಕೀಯ ಪಕ್ಷಗಳು ಸಹಕರಿಸಬೇಕೆಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಮನವಿ ಮಾಡಿದ್ದಾರೆ.

*******

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಮಾರ್ಗಸೂಚಿಯಂತೆ ಒಟ್ಟು ವೆಚ್ಚದ ಶೇಕಡ 60 ರಷ್ಟನ್ನು ಕೃಷಿ ಮತ್ತು ಸಂಬಂಧಿತ ಚಟುವಟಿಕೆಗಳಿಗೆ ಖರ್ಚು ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಹಾವೇರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಕ್ಷಯ್ ಶ್ರೀಧರ್ ತಿಳಿಸಿದ್ದಾರೆ.

*******

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ, ಗದಗ ಜಿಲ್ಲೆ 2023-24 ರ ಆರ್ಥಿಕ ವರ್ಷದಲ್ಲಿ 6 ತಿಂಗಳಲ್ಲಿ ಗುರಿಯನ್ನು ತಲುಪುವ ಮೂಲಕ ಮನ್‌ರೇಗಾ ಯೋಜನೆಯಡಿ ರಾಜ್ಯದಲ್ಲಿ ಎರಡನೇ ಸ್ಥಾನ ಪಡೆದಿದೆ ಎಂದು ಗದಗ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******

ಮಂಗಳೂರು ದಸರಾ ಎಂದೇ ಪ್ರಸಿದ್ಧಿ ಪಡೆದ ಮಂಗಳೂರಿನ ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರದ ನವರಾತ್ರಿ ಉತ್ಸವ ಇದೇ ತಿಂಗಳ 15 ರಿಂದ 25ರವರೆಗೆ ನಡೆಯಲಿದೆ ಎಂದು ಕ್ಷೇತ್ರದ ಆಡಳಿತ ಮಂಡಳಿ ಅಧ್ಯಕ್ಷ ಎಚ್.ಎಸ್.ಸಾಯಿರಾಮ್ ತಿಳಿಸಿದ್ದಾರೆ.

*******